ಎಸ್ ಸಿಃ 72/2020 ಪಿ ಡಬ್ಲ್ಯೂ ಃ 1 - ಚಿಕ್ಕರಾಮು

ದಿನಾಂಕಃ 07.03.2024 ರಂದು ಸಾಕ್ಷಿಗೆ ಪ್ರಮಾಣ ವಚನ ಮಾಡಿಸಲಾಯಿತು.

ಪಾಟೀ ಸವಾಲು ಪ್ರತಿವಾದಿ ಪರ ಃ ಶ್ರೀ ಪಿ ಜಿ ವಕೀಲರಿಂದಃ

ಹಣಕ್ಕೆ ಸಂಬಂಧಿಸಿದಂತೆ ಈ ಕೇಸನ್ನು ಹೊರತುಪಡಿಸಿ ನಾನು ಬೇರೆ ಯಾವುದೇ ಕೇಸನ್ನು ಹಾಕಿರುವುದಿಲ್ಲ. ನಮ್ಮ ಊರಿನಲ್ಲಿ ನಾನು ಲೇವಾದೇವಿ ವ್ಯವಹಾರವನ್ನು ಮಾಡುತ್ತೇನೆ ಎಂದರೆ ಸರಿಯಲ್ಲ. ಇದೇ ನ್ಯಾಯಾಲಯದಲ್ಲಿ ಹಣಕ್ಕೆ ಸಂಬಂಧಿಸಿದಂತೆ ನಾನು ಕೇಸುಗಳನ್ನು ಹಾಕಿದ್ದೇನೆ ಎಂದರೆ ಸರಿಯಲ್ಲ. ಪ್ರತಿವಾದಿ ಹಣವನ್ನು ಪಡೆದಾಗ ಶ್ರೀಕಂಠ ಮತ್ತು ನಾಗರಾಜು ಅಲ್ಲಿ ಇದ್ದರು. ಪ್ರತಿವಾದಿಯು ಶ್ರೀಕಂಠ ಹಾಗೂ ನಾಗರಾಜು ಅವರನ್ನು ಕರೆದುಕೊಂಡು ಬಂದಿರುತ್ತಾರೆ. ನಾನು ಚೀಟಿ ವ್ಯವಹಾರವನ್ನು ಮಾಡುತ್ತೇನೆ ಎಂದೆರ ಸರಿಯಲ್ಲ. ಚೀಟಿಯ ಭದ್ರತೆಗಾಗಿ ಖಾಲಿ ಪ್ರನೋಟ್ ಅಲ್ಲಿ ನಾನು ಪ್ರತಿವಾದಿಯ ಸಹಿಯನ್ನು ಪಡೆದಿರುತ್ತೇನೆ ಎಂದರೆ ಸರಿಯಲ್ಲ. ಪ್ರತಿವಾದಿಯು ನನ್ನಿಂದ ಸಾಲವನ್ನು ಪಡೆದಿರುವುದಿಲ್ಲ ಹಾಗೂ ನನ್ನ ಹಾಗೂ ಪ್ರತಿವಾದಿಯ ನಡುವೆ ಯಾವುದೇ ಸಾಲದ ವ್ಯವಹಾರ ನಡೆದಿರುವುದಿಲ್ಲ ಎಂದರೆ ಸರಿಯಲ್ಲ. ಸಾಕ್ಷಿದಾರರ ಸಮಕ್ಷಮ ಯಾವುದೇ ಹಣದ ವ್ಯವಹಾರ ನಡೆದಿಲ್ಲ ಎಂದರೆ ಸರಿಯಲ್ಲ. ನಾನು, ಪತ್ರ ಬರಹಗಾರರು ಮತ್ತು ಸಾಕ್ಷಿದಾರರು ಸೇರಿಕೊಂಡು ನಿಪಿ 1 ಮತ್ತು 2 ಅನ್ನು ಸೃಷ್ಟಿಸಿದ್ದೇವೆ ಎಂದರೆ ಸರಿಯಲ್ಲ. ಪ್ರತಿವಾದಿಯು ಯಾವುದೇ ಹಣವನ್ನು ಸಾಲವಾಗಿ ಪಡೆಯದೇ ಇದ್ದರೂ ಸಹ ನಾನು ಆತನಿಂದ ಅಕ್ರಮ ಲಾಭಪಡೆಯಬೇಕು ಎಂಬ ದುರುದ್ದೇಶದಿಂದ ನಾನು ಈ ಸುಳ್ಳು ಕೇಸನ್ನು ಹಾಕಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಚೀಟಿ ವ್ಯವಹಾರಕ್ಕೆ ಸಂಬಂಧಿಸಿದಂತೆ ಖಾಲಿ ಪ್ರನೋಟ್ ಅಲ್ಲಿ ಸಹಿಯನ್ನು ಪಡೆದು ಅದನ್ನು ದುರುಪಯೋಗ ಪಡಿಸಿಕೊಂಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿದಾರರನ್ನು ಪ್ರತಿವಾದಿ ಕರೆದುಕೊಂಡು ಬಂದು, ಅವರ ಮುಂದೆ ಹಣದ ವ್ಯವಹಾರವಾಗಿದೆ ಎಂದು ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.
ಓ ಹೇ ಕೇ ಸ ಇ ಒ

ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು
ಶ್ರೀರಂಗಪಟ್ಟಣ